ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದರಾಜು ಇವರು ನಿಯಮ 72ರಡಿ ಗಮನ ಸೆಳೆಯುವ ಸೂಚನೆ **ನಗರದ ಕೊಳಗೇರಿಗಳಲ್ಲಿ ವಾಸವಿರುವ 2 ರಿಂದ 5 ವರ್ಷದೊಳಗಿನ ಮಕ್ಕಳಲ್ಲಿ ಗಂಭೀರ ಪೌಷ್ಠಿಕಾಂಶದ ಕೊರತೆ ಉಂಟಾಗಿದೆ ಎಂಬುದನ್ನು ಬೆಂಗಳೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ನಡೆಸಿದ ಇತ್ತೀಚಿನ ಅಧ್ಯಯನವೊಂದು ಬೆಳಕಿಗೆ ತಂದಿದೆ. ಈ ಅಧ್ಯಯನದ ಪ್ರಕಾರ, 64.54% ಮಕ್ಕಳು ಮಧ್ಯಮ ಮಟ್ಟದ ಅಪೌಷ್ಠಿಕತೆಯಿಂದ ಬಳಲುತ್ತಿದ್ದಾರೆ. ಮಹತ್ವದ ವಿಷಯವೆಂದರೆ, ಬಹುತೇಕ ಮಕ್ಕಳು ಬಿಸ್ಕತ್ತು, ಚಿಪ್ಸ್ ಮುಂತಾದ ಅತಿ ಸಂಸ್ಕರಿಸಿದ ತಿಂಡಿಗಳ ಮೇಲೆ ಅವಲಂಬಿತವಾಗಿದ್ದಾರೆ. ಹಣ್ಣು, ಬೇಳೆಕಾಳುಗಳು, ತರಕಾರಿ ಮತ್ತು ಮಾಂಸಹಾರಿ ಸೇವನೆಯ ಪ್ರಮಾಣ ಕಡಿಮೆಯಾಗಿದೆ. ಅಂಗನವಾಡಿ ಮತ್ತು ಸಮುದಾಯದ ಆರೋಗ್ಯ ಕಾರ್ಯಕರ್ತರ ಮೂಲಕ ತಾಯಂದಿರಿಗೆ ಪೌಷ್ಠಿಕಾಂಶದ ಮಹತ್ವದ ಬಗ್ಗೆ ಶಿಕ್ಷಣ ನೀಡಬೇಕಾಗಿರುವ ಹಿನ್ನಲೆಯಲ್ಲಿ, ಮಕ್ಕಳ ಹಿತದೃಷ್ಟಿಯಿಂದ** ಎಂಬ ವಿಷಯದ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಉತ್ತರ:

## ಉತ್ತರ

ಕೇಂದ್ರ ಸರ್ಕಾರವು 2021-22ನೇ ಸಾಲಿನಿಂದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ನೊಂದಣಿಯಾಗುವ ಫಲಾನುಭವಿಗಳ ಮಾಹಿತಿಯನ್ನು ತ್ವರಿತವಾಗಿ ಮೇಲ್ವಿಚಾರಣೆ ಮಾಡಲು ಪೋಷಣ್ ಟ್ರಾಕರ್ ತಂತ್ರಾಂಶವನ್ನು ಅಭಿವೃದ್ಧಿಪಡಿಸಿರುತ್ತದೆ. ಸದರಿ ತಂತ್ರಾಂಶದಲ್ಲಿ 02 ವರ್ಷದಲ್ಲಿ **ಬೆಂಗಳೂರು ನಗರ ಸೇರಿದಂತೆ ಇತರೆ 13 ಮಹಾನಗರ ಪಾಲಿಕೆಗಳಲ್ಲಿ** ದಾಖಲಾಗಿರುವ ಮಕ್ಕಳ ತೂಕ ಮತ್ತು ಎತ್ತರ ಅಳತೆ ಮಾಡಲಾದ ವಿವರ ಈ ಕೆಳಕಂಡಂತಿದೆ:

| **ವಿವರ** | **2023-24 ಮಾರ್ಚ್-24ರ ಅಂತ್ಯಕ್ಕೆ** | | **2024-25 ಮಾರ್ಚ್-25ರ ಅಂತ್ಯಕ್ಕೆ** | | **2025-26 ಅಕ್ಟೋಬರ್ -2025 ರ ಅಂತ್ಯಕ್ಕೆ** | |
|---|---|---|---|---|---|---|
| | **ಸಂಖ್ಯೆ** | **(%)** | **ಸಂಖ್ಯೆ** | **(%)** | **ಸಂಖ್ಯೆ** | **(%)** |
| **ಒಟ್ಟು ದಾಖಲಾದ ಮಕ್ಕಳು** | 1799084 | | 1988259 | | 1727659 | |
| **ಅಳತೆ ಮಾಡಲಾದ ಮಕ್ಕಳ ಸಂಖ್ಯೆ** | 1732364 | 96.29 | 1971536 | 99.16 | 1716204 | 99.34 |
| **ಸಾಧಾರಣ ಅಪೌಷ್ಟಿಕ ಮಕ್ಕಳು** | 93862 | 5.42 | 67348 | 3.42 | 54129 | 3.15 |
| **ತೀವ್ರ ಅಪೌಷ್ಟಿಕ ಮಕ್ಕಳು** | 46371 | 2.68 | 6457 | 0.33 | 4147 | 0.24 |

ಸಾಧಾರಣ ಅಪೌಷ್ಟಿಕ ಮಕ್ಕಳು ಹಾಗೂ ತೀವ್ರ ಅಪೌಷ್ಟಿಕ ಮಕ್ಕಳ ಸಂಖ್ಯೆ ಗಣನೀಯವಾಗಿ ಕಡಿಮೆಯಾಗಿರುವುದು ಕಂಡುಬಂದಿರುತ್ತದೆ.

## ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾಗುವ ಮಕ್ಕಳಿಗೆ ಒದಗಿಸುತ್ತಿರುವ ಪೂರಕ ಪೌಷ್ಟಿಕ ಆಹಾರ

ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾದ 6 ತಿಂಗಳಿಂದ 6 ವರ್ಷದ ಮಕ್ಕಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ 300 ದಿನಗಳ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.

- ಎಲ್ಲಾ ಮಕ್ಕಳಿಗೆ ಅಂಗನವಾಡಿ ಕೇಂದ್ರದಲ್ಲಿ ಪ್ರತಿದಿನ ರೂ.**8.00** ಮೌಲ್ಯದ **ಪೂರಕ ಪೌಷ್ಠಿಕ ಆಹಾರ**ವನ್ನು ನೀಡಲಾಗುತ್ತಿದೆ.
- **ತೀವ್ರ ಅಪೌಷ್ಠಿಕ** ಮಕ್ಕಳಿಗೆ ಪ್ರತಿ ದಿನ ರೂ.12.00 ಮೌಲ್ಯದ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.
- ಅಂಗನವಾಡಿಗೆ ಹಾಜರಾಗುವ **3 ವರ್ಷದಿಂದ 6** ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ **2 ದಿನ ಮೊಟ್ಟೆಯನ್ನು** ನೀಡಲಾಗುತ್ತಿದೆ.

......2

- ರಾಜ್ಯ ಸರ್ಕಾರದ ಕ್ಷೀರಭಾಗ್ಯ ಯೋಜನೆಯಡಿ 6 ತಿಂಗಳಿಂದ 6 ವರ್ಷದ ಎಲ್ಲಾ ಅಂಗನವಾಡಿ ಮಕ್ಕಳಿಗೆ ವಾರದಲ್ಲಿ 5 ದಿನ 150 ಮಿ.ಲಿ ಹಾಲನ್ನು (15ಗ್ರಾಂ ಕೆನೆಭರಿತ ಹಾಲಿನಪುಡಿ, 5 ಗ್ರಾಂ ಸಕ್ಕರೆ) ನೀಡಲಾಗುತ್ತಿದೆ.
- 6 ತಿಂಗಳಿಂದ 3 ವರ್ಷದ ತೀವ್ರ / ಸಾಧಾರಣ ಅಪೌಷ್ಟಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3 ದಿನ 20 ಗ್ರಾಂ. ಹಾಲಿನ ಪುಡಿಯನ್ನು ಮನೆಗೆ ವಿತರಿಸಲಾಗುತ್ತಿದೆ.
- 3 ವರ್ಷದಿಂದ 6 ವರ್ಷದ ತೀವ್ರ / ಸಾಧಾರಣ ಅಪೌಷ್ಟಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ಹಾಗೂ 3 ದಿನ 20 ಗ್ರಾಂ. ಹಾಲಿನ ಪುಡಿಯನ್ನು ಮನೆಗೆ ವಿತರಿಸಲಾಗುತ್ತಿದೆ.
- ತೀವ್ರ ಅಪೌಷ್ಟಿಕ ಮಕ್ಕಳಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪೌಷ್ಟಿಕ ಪುನರ್ವಸತಿ ಕೇಂದ್ರ (NRC) ಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ

ಪ್ರತಿ ಮಾಹೆ ತಾಯಂದಿರ ಸಭೆ ಹಾಗೂ ಆರೋಗ್ಯ ಮತ್ತು ಪೌಷ್ಟಿಕ ಶಿಬಿರಗಳನ್ನು ಏರ್ಪಡಿಸಿ ಅಧಿಕ ಪೌಷ್ಟಿಕತೆಯುಳ್ಳ ಆಹಾರಗಳನ್ನು ತಯಾರಿಸುವ ಕುರಿತು ಮತ್ತು ಮಕ್ಕಳಿಗೆ ಪೌಷ್ಟಿಕತೆಯುಳ್ಳ ಆಹಾರವನ್ನು ನೀಡಲು ಅರಿವು ಕಾರ್ಯಕ್ರಮವನ್ನು ನಡೆಸಲಾಗುತ್ತಿದೆ ಹಾಗೂ ಪೋಷಣ್ ಮಾಸಾಚರಣೆ ಕಾರ್ಯಕ್ರಮದಲ್ಲಿಯೂ ಸಹ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ವಿಶೇಷ ಪೌಷ್ಟಿಕ ಶಿಬಿರಗಳನ್ನು ಆಯೋಜಿಸಿ, ಪೋಷಕರಿಗೆ, ಬಾಲ ವಿಕಾಸ ಸಮಿತಿ ಸದಸ್ಯರಿಗೆ ಹಾಗೂ ನಾಗರಿಕರಿಗೆ ಪೌಷ್ಟಿಕಾಂಶದ ಮಹತ್ವದ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.

ಗರ್ಭಿಣಿ, ಬಾಣಂತಿ ಸಮುದಾಯದಲ್ಲಿ ಮಗುವಿಗೆ ತಾಯಿಯ ಎದೆ ಹಾಲಿನ ಮಹತ್ವದ ಕುರಿತು ಸ್ತನ್ಯಪಾನ ಸಪ್ತಾಹ ಜಾಗೃತಿ ಕಾರ್ಯಕ್ರಮಗಳ ಮೂಲಕ ಅರಿವು ಮೂಡಿಸಲಾಗುತ್ತಿದೆ.

ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾಗುವ 06 ವರ್ಷದ ಒಳಗಿನ ಮಕ್ಕಳಲ್ಲಿನ ಅಪೌಷ್ಟಿಕತೆಯನ್ನು ಗುರುತಿಸಲು ಮತ್ತು ತೀವ್ರ ಮತ್ತು ಸಾಧಾರಣ ಅಪೌಷ್ಟಿಕ ಮಕ್ಕಳನ್ನು ಸುಧಾರಣೆ ತರುವ ನಿಟ್ಟಿನಲ್ಲಿ ಪ್ರಸ್ತುತ ಕರ್ನಾಟಕ ರಾಜ್ಯದ high burdened in terms of wasting and stunting ಎಂದು ಗುರುತಿಸಲಾಗಿರುವ 4 ಕಂದಾಯ ವಿಭಾಗಗಳ ಬಳ್ಳಾರಿ, ಬೀದರ, ಕಲಬುರಗಿ, ಯಾದಗಿರಿ, ಬೆಳಗಾವಿ, ರಾಯಚೂರು, ಚಿತ್ರದುರ್ಗ ಮತ್ತು ವಿಜಯನಗರ ಜಿಲ್ಲೆಗಳಲ್ಲಿ "ಚಿಗುರು" - ಸಮುದಾಯ ಆಧಾರಿತ ತೀವ್ರ ಅಪೌಷ್ಟಿಕ ಮಕ್ಕಳ ನಿರ್ವಹಣೆ (C-MAM) ಎಂಬ ವಿನೂತನ ಯೋಜನೆಯನ್ನು UNICEF, CEGIS ಮತ್ತು IPE Global ಸಂಸ್ಥೆಗಳ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗಿದೆ.

ಸದರಿ ಯೋಜನೆಯಡಿ ಆರಂಭಿಕ ಹಂತಗಳಲ್ಲಿ ತೀವ್ರ ಅಪೌಷ್ಟಿಕತೆಯನ್ನು ಗುರುತಿಸಿ, ವೈದ್ಯಕೀಯ ಸಮಸ್ಯೆಗಳಿಲ್ಲದ ತೀವ್ರ ಮತ್ತು ಸಾಧಾರಣ ಅಪೌಷ್ಟಿಕ ಮಕ್ಕಳಿಗೆ ವೈದ್ಯಕೀಯ ಪೋಷಕಾಂಶಗಳು ಹಾಗೂ ಹೆಚ್ಚು ಪೋಷಕಾಂಶಯುಕ್ತ ಪೌಷ್ಟಿಕ ಆಹಾರವನ್ನು ನೀಡುವುದರೊಂದಿಗೆ, ಮಕ್ಕಳ ಪೋಷಣೆಯು ತಾಯಿಯ ಜವಾಬ್ದಾರಿ ಮಾತ್ರವಲ್ಲದೇ ಇಡೀ ಕುಟುಂಬದ ಜವಾಬ್ದಾರಿ ಎಂಬ ಪರಿಕಲ್ಪನೆಯಡಿ ಗರ್ಭಿಣಿ, ಬಾಣಂತಿಯರ, 06 ವರ್ಷದ ಒಳಗಿನ ಮಕ್ಕಳ ತಾಯಂದಿರು ಮತ್ತು ಸಮುದಾಯದ ಸಕ್ರಿಯ ಭಾಗವಹಿಸುವಿಕೆಯಾಗಿರುತ್ತದೆ.

"ಚಿಗುರು" ಕಾರ್ಯಕ್ರಮದ ಅನುಷ್ಠಾನ ಕುರಿತು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ರಾಜ್ಯ ಮಟ್ಟದಲ್ಲಿ UNICEF ಮತ್ತು IPE Global ಸಂಸ್ಥೆಗಳ ಸಹಯೋಗದೊಂದಿಗೆ ತರಬೇತುದಾರರ ತರಬೇತಿಯನ್ನು ನೀಡಲಾಗಿದ್ದು, ಕ್ಷೇತ್ರಮಟ್ಟದಲ್ಲಿ ಕಾರ್ಯಕ್ರಮದ ಯಶಸ್ವಿ ಅನುಷ್ಠಾನಕ್ಕೆ ಕ್ರಮವಹಿಸಲಾಗಿದೆ

**ಸಂಖ್ಯೆ:** ಮಮಇ 307 ಐಸಿಡಿ 2025

(ಲಕ್ಷ್ಮೀ ಆರ್. ಹೆಬ್ಬಾಳಕರ್)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ,
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು.